ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ. ಇಡಿ/ಕೆಇಎ/ಯುಜಿಸಿಇಟಿ/2024 ದಿನಾಂಕ. 14.02.2024

ಟಿಪ್ಪಣಿ

**ಸ್ಯಾಟ್ಸ್‌ನಲ್ಲಿ ವಿದ್ಯಾರ್ಥಿಗಳ ಮಾಹಿತಿಯನ್ನು ತಿದ್ದುಪಡಿ ಮಾಡುವ ಕುರಿತು**

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಸ್ಯಾಟ್ಸ್ ತಂತ್ರಾಂಶದಲ್ಲಿ ವಿದ್ಯಾರ್ಥಿಯ ಹೆಸರು ಹಾಗೂ ವರ್ಷವಾರು ತರಗತಿ ತಪ್ಪಾಗಿದ್ದರೆ ತಂತ್ರಾಂಶದಲ್ಲಿ ತಿದ್ದುಪಡಿ ಮಾಡಲು ಜಿಲ್ಲಾಉಪನಿರ್ದೇಶಕರು (ಆಡಳಿತ) ರವರ ಹಂತದಲ್ಲಿ ಶಾಲಾ ಶಿಕ್ಷಣ ಇಲಾಖೆಯು ಅವಕಾಶವನ್ನು ಕಲ್ಪಿಸಲಾಗಿದೆ. ಈ ಹಿನ್ನಲೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯಿಂದ ದಿನಾಂಕ. 13.02.2024ರಂದು ಜ್ಞಾಪನ ಹೊರಡಿಸಿದ್ದು, ಅದರಂತೆ ಸ್ಯಾಟ್ಸ್ ತಂತ್ರಾಂಶದಲ್ಲಿ ತಿದ್ದುಪಡಿ ಮಾಡಿಸಲು ವಿದ್ಯಾರ್ಥಿಗಳು / ಶಾಲಾ / ಕಾಲೇಜುಗಳು ಕ್ರಮವಹಿಸಬಹುದು.

---

No. ED/KEA/UGCET/2024 Date: 14.02.2024

NOTE

**Corrections in the SATS database – reg**

Department of School Education vide order dated 13.02.2024 has given opportunity to the candidates whose name, class, year of study is wrong in the SATS database, to get it corrected from the DDPI( Admn) of the respective districts. Candidates / Schools/ Colleges can take further steps as per the order of the Department of School Education (copy enclosed) for correction in the SATS database.

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in

# ಕರ್ನಾಟಕ ಸರ್ಕಾರ

**ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-1**

ಸಂಖ್ಯೆ: DPI-CPIOSATS(NC-)/1/2024- 1304574 ದಿನಾಂಕ: 13-02-2024

**:ಜ್ಞಾಪನ:**

ವಿಷಯ: ಸ್ಯಾಟ್ಸ್ ನಲ್ಲಿ ವಿದ್ಯಾರ್ಥಿಗಳ ಮಾಹಿತಿಯನ್ನು ತಿದ್ದುಪಡಿ ಮಾಡುವ ಕುರಿತು

ಉಲ್ಲೇಖ: 1)ಕರ್ನಾಟಕ ಪರೀಕ್ಷಾ ಪ್ರಾಧಿಕಾರ ರವರ ಅಧಿಸೂಚನೆ ದಿನಾಂಕ: 09.01.2024
2)ಕರ್ನಾಟಕ ಪರೀಕ್ಷಾ ಪ್ರಾಧಿಕಾರ ರವರ ಸ್ಪಷ್ಟೀಕರಣ ದಿನಾಂಕ: 03.02.2024

**********************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(1)ರ ಸುತ್ತೋಲೆಯಲ್ಲಿ ಕರ್ನಾಟಕ ಸಾಮಾನ್ಯ ಪ್ರವೇಶ ಪರೀಕ್ಷೆ-2024 ಕ್ಕೆ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ, ಉಲ್ಲೇಖ(2) ರಲ್ಲಿ ದಿನಾಂಕ: 10.02.2024 ರಿಂದ ಅಭ್ಯರ್ಥಿಗಳು ಕೆಸಿಇಟಿ ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿಯನ್ನು ತಿದ್ದುಪಡಿ ಮಾಡಲು ಅವಕಾಶ ಕಲ್ಪಿಸಲಾಗುತ್ತದೆ ಎಂದು ಸ್ಪಷ್ಟೀಕರಣ ನೀಡಿರುತ್ತಾರೆ.

ವಿದ್ಯಾರ್ಥಿಯ 10 ನೇ ತರಗತಿ ಉತ್ತೀರ್ಣರಾಗಿದ್ದು, ಸ್ಯಾಟ್ಸ್ ತಂತ್ರಾಂಶದಲ್ಲಿ ಹೆಸರು ಹಾಗೂ ವರ್ಷವಾರು ತರಗತಿ ತಪ್ಪಾಗಿದ್ದರೆ ತಿದ್ದುಪಡಿಗೆ ವಿದ್ಯಾರ್ಥಿಯು ಮನವಿ ಸಲ್ಲಿಸಿದ್ದಲ್ಲಿ, ವಿದ್ಯಾರ್ಥಿಯ ಹೆಸರಿನ ತಿದ್ದುಪಡಿಗೆ 10ನೇ ತರಗತಿಯ ಅಂಕಪಟ್ಟಿ ಹಾಗೂ ಶಾಲಾ ದಾಖಲಾತಿ ರಿಜಿಸ್ಟರ್ ನಲ್ಲಿ ಇರುವಂತೆ ಹಾಗೂ ಒಂದೇ ಶಾಲೆಯಲ್ಲಿ ವರ್ಷವಾರು ತರಗತಿ ತಿದ್ದುಪಡಿಗೆ Study Certificate ನಲ್ಲಿ ಇರುವಂತೆ ಸ್ಯಾಟ್ಸ್ ತಂತ್ರಾಂಶದಲ್ಲಿ ತಿದ್ದುಪಡಿ ಮಾಡಲು ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರ ಹಂತದಲ್ಲಿ ಅವಕಾಶ ಕಲ್ಪಿಸಲಾಗಿದೆ.

ವಿದ್ಯಾರ್ಥಿಯ ಹೆಸರು ತಿದ್ದುಪಡಿಗೆ ಬರುವ ಅರ್ಜಿಗಳನ್ನು 10ನೇ ತರಗತಿಯ ಅಂಕಪಟ್ಟಿ ಹಾಗೂ ಶಾಲಾ ದಾಖಲಾತಿ ರಿಜಿಸ್ಟರ್‌ನೊಂದಿಗೆ ಪರಿಶೀಲಿಸಿ ಹಾಗೂ ಒಂದೇ ಶಾಲೆಯಲ್ಲಿ ವರ್ಷವಾರು ತರಗತಿಗಳ ತಿದ್ದುಪಡಿಗೆ ಬರುವ ಅರ್ಜಿಗಳನ್ನು Study Certificate ನೊಂದಿಗೆ ಪರಿಶೀಲಿಸಿ ದಾಖಲೆಗಳನ್ನು ದೃಢೀಕರಿಸಿಕೊಂಡು ಹೆಸರು ಹಾಗೂ ಒಂದೇ ಶಾಲೆಯಲ್ಲಿ ವರ್ಷವಾರು ತರಗತಿಗಳ ತಿದ್ದುಪಡಿ ಅರ್ಜಿಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಲು ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರಿಗೆ ಸೂಚಿಸಿದೆ.

ಸಹಿ/-
ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ
ಬೆಂಗಳೂರು

ರವರಿಗೆ,
ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ ರವರಿಗೆ ಸೂಕ್ತ ಕ್ರಮಕ್ಕಾಗಿ

Scanned By KagazScanner